Kannada - ಪರಿಶುದ್ಧಾತ್ಮ ಸ್ಕ್ರಿಪ್ಚರ್ಸ್ - Holy Spirit Scriptures

ವಿಮೋಚನಕಾಂಡ 35:31 ಅವನನ್ನು ದೇವರಾತ್ಮ ನಿಂದ ಜ್ಞಾನದಲ್ಲಿಯೂ ತಿಳುವಳಿಕೆಯಲ್ಲಿಯೂ ವಿವೇಕ ದಲ್ಲಿಯೂ ಎಲ್ಲಾ ವಿಧವಾದ ಕೌಶಲ್ಯದಲ್ಲಿಯೂ

ಅರಣ್ಯಕಾಂಡ 11:25 ಕರ್ತನು ಮೇಘದೊಳಗೆ ಇಳಿದು ಬಂದು ಅವನ ಸಂಗಡ ಮಾತನಾಡಿ ಅವನ ಮೇಲಿರುವ ಆತ್ಮದಲ್ಲಿ ಪಾಲನ್ನು ತೆಗೆದು ಹಿರಿಯರಾದ ಎಪ್ಪತ್ತು ಮಂದಿಯ ಮೇಲೆ ಇಟ್ಟನು. ಆತ್ಮವು ಅವರ ಮೇಲೆ ನೆಲೆಯಾಗಿ ದ್ದಾಗ ಅವರು ಪ್ರವಾದಿಸಿದರು. ಅದನ್ನು ನಿಲ್ಲಿಸಲಿಲ್ಲ.

1 ಸಮುವೇಲನು 10:6 ಆಗ ಕರ್ತನ ಆತ್ಮನು ನಿನ್ನ ಮೇಲೆ ಬರುವನು; ನೀನು ಅವರ ಸಂಗಡ ಪ್ರವಾದಿಸುವಿ; ಬೇರೆ ಮನುಷ್ಯನಾಗಿ ಮಾರ್ಪಡುವಿ.

2 ಸಮುವೇಲನು 23:2 ಕರ್ತನ ಆತ್ಮನು ನನ್ನಿಂದ ಮಾತನಾಡಿದನು; ಆತನ ವಾಕ್ಯವು ನನ್ನ ಬಾಯಿಯಲ್ಲಿತ್ತು.

ಯೋಬನು 33:4 ದೇವರ ಆತ್ಮನು ನನ್ನನ್ನು ಉಂಟುಮಾಡಿದನು; ಸರ್ವಶಕ್ತನ ಶ್ವಾಸವು ನನಗೆ ಜೀವವನ್ನು ಕೊಟ್ಟಿತು.

ಯೆಶಾಯ 11:2 ಅವನ ಮೇಲೆ ಜ್ಞಾನ ವಿವೇಕ ದಾಯಕ ಆತ್ಮ, ಆಲೋಚನಾ ಪರಾಕ್ರಮದ ಆತ್ಮ,ತಿಳುವಳಿಕೆಯ ಆತ್ಮ ಕರ್ತನ ಭಯದ ಆತ್ಮ, ಅಂತೂ ಕರ್ತನ ಆತ್ಮನು ನೆಲೆಯಾಗುವನು;

ಮಿಕ 3:8 ಆದರೆ ನಿಶ್ಚಯವಾಗಿ ನಾನು ಯಾಕೋ ಬ್ಯರಿಗೆ ಅವನ ಅಪರಾಧವನ್ನೂ ಇಸ್ರಾಯೇಲಿಗೆ ಅವನ ಪಾಪವನ್ನೂ ತಿಳಿಸುವದಕ್ಕೆ ದೇವರ ಆತ್ಮನ ಮುಖಾಂತರ ಶಕ್ತಿಯಿಂದಲೂ ನ್ಯಾಯದಿಂದಲೂ ತ್ರಾಣದಿಂದಲೂ ತುಂಬಿದ್ದೇನೆ.

ಜೆಕರ್ಯ 4:6 ನಾನು--ನನ್ನ ಒಡೆಯನೇ, ಇಲ್ಲ ಅಂದೆನು. ಆಗ ಅವನು ಉತ್ತರಕೊಟ್ಟು ನನಗೆ ಹೇಳಿದ್ದೇನಂದರೆ--ಜೆರುಬ್ಬಾಬೆಲನಿಗೆ ಕರ್ತನ ವಾಕ್ಯವು ಇದೇ--ಬಲ

ದಿಂದಲ್ಲ, ಶಕ್ತಿಯಿಂದಲ್ಲ, ನನ್ನ ಆತ್ಮದಿಂದಲೇ ಎಂದು ಸೈನ್ಯಗಳ ಕರ್ತನು ಹೇಳುತ್ತಾನೆ.

ಮತ್ತಾಯನು 12:28 ಆದರೆ ನಾನು ದೇವರ ಆತ್ಮನಿಂದ ದೆವ್ವಗಳನ್ನು ಬಿಡಿಸಿದರೆ ದೇವರ ರಾಜ್ಯವು ನಿಮ್ಮ ಬಳಿಗೆ ಬಂದಿದೆಯಲ್ಲಾ.

ಮತ್ತಾಯನು 28:19 ಆದದರಿಂದ ನೀವು ಹೋಗಿ ಎಲ್ಲಾ ಜನಾಂಗಗಳಿಗೆ ಬೋಧಿಸಿ ತಂದೆಯ, ಮಗನ, ಪರಿಶುದ್ಧಾತ್ಮನ ಹೆಸರಿನಲ್ಲಿ ಬಾಪ್ತಿಸ್ಮ ಮಾಡಿರಿ;

ಮಾರ್ಕನು 1:10 ಆತನು ನೀರಿನೊಳಗಿಂದ ಮೇಲಕ್ಕೆ ಬಂದ ಕೂಡಲೆ ಆಕಾಶಗಳು ತೆರೆದಿರುವದನ್ನೂ ಆತ್ಮನು ಪಾರಿವಾಳದ ಹಾಗೆ ಆತನ ಮೇಲೆ ಇಳಿದು ಬರುವದನ್ನೂ ಯೋಹಾನನು ಕಂಡನು.

ಮಾರ್ಕನು 13:11 ಆದರೆ ಅವರು ನಿಮ್ಮನ್ನು ಒಪ್ಪಿಸುವದಕ್ಕಾಗಿ ತಕ್ಕೊಂಡು ಹೋಗುವಾಗ ನೀವು ಏನು ಮಾತನಾಡಬೇಕೆಂಬದನ್ನು ಮುಂಚಿತವಾಗಿ ಚಿಂತಿಸಬೇಡಿರಿ, ಆಲೋಚಿಸಲೂ ಬೇಡಿರಿ; ಆದರೆ ಆ ಗಳಿಗೆಯಲ್ಲಿ ನಿಮಗೆ ಯಾವದು ಕೊಡಲ್ಪಡುವದೋ ಅದನ್ನೇ ಮಾತನಾಡಿರಿ; ಯಾಕಂ ದರೆ ಮಾತನಾಡುವವರು ನೀವಲ್ಲ, ಆದರೆ ಪರಿಶು

ಲೂಕನು 2:26 ಕರ್ತನಾಗಿರುವ ಕ್ರಿಸ್ತನನ್ನು ಅವನು ನೋಡುವದಕ್ಕಿಂತ ಮುಂಚೆ ಮರಣ ಹೊಂದುವದಿಲ್ಲವೆಂದು ಪರಿಶುದ್ಧಾತ್ಮನಿಂದ ಅವನಿಗೆ ಪ್ರಕಟವಾಗಿತ್ತು.

ಲೂಕನು 4:1 ಯೇಸು ಪರಿಶುದ್ಧಾತ್ಮನಿಂದ ತುಂಬಿದವನಾಗಿ ಯೊರ್ದನಿನಿಂದ ಹಿಂತಿರುಗಿ ಬಂದು ಆತ್ಮ ನಿಂದ ಅಡವಿಯೊಳಕ್ಕೆ ನಡಿಸಲ್ಪಟ್ಟು

ಲೂಕನು 4:18-21 ಕರ್ತನ ಆತ್ಮವು ನನ್ನ ಮೇಲೆ ಇದೆ; ಯಾಕಂದರೆ ಬಡವರಿಗೆ ಸುವಾರ್ತೆ ಸಾರುವದಕ್ಕೆ ಆತನು ನನ್ನನ್ನು ಅಭಿಷೇಕಿಸಿದ್ದಾನೆ; ಮುರಿದ ಹೃದಯ ವುಳ್ಳವರನ್ನು ಸ್ವಸ್ಥಮಾಡುವದಕ್ಕೂ ಸೆರೆಯಲ್ಲಿದ್ದವರಿಗೆ ಬಿಡುಗಡೆಯನ್ನು ಸಾರುವದಕ್ಕೂ ಕುರುಡರಿಗೆ ದೃಷ್ಟಿ ಕೊಡುವದಕ್ಕೂ ಜಜ್ಜಲ್ಪಟ್ಟವರನ್ನು ಬಿ 19 ಕರ್ತನ

ಅಂಗೀಕೃತವಾದ ವರುಷವನ್ನು ಸಾರುವದಕ್ಕೂ ಆತನು ನನ್ನನ್ನು ಕಳುಹಿಸಿದ್ದಾನೆ ಎಂದು ಬರೆದಿರುವದನ್ನು ಕಂಡು ಓದಿದನು. 20 ಆತನು ಆ ಪುಸ್ತಕವನ್ನು ಮುಚ್ಚಿ ತಿರಿಗಿ ಪರಿಚಾರಕನ ಕೈಗೆ ಕೊಟ್ಟು ಕೂತುಕೊಂಡನು. ಆಗ ಆ ಸಭಾ ಮಂದಿರದಲ್ಲಿದ್ದವ ರೆಲ್ಲರ ಕಣ್ಣುಗಳು ಆತನನ್ನೇ ದೃಷ್ಟಿಸಿದವು. 21 ಆತನು ಅವರಿಗೆ-- ನೀವು ಕಿವಿಯಿಂದ ಕೇಳಿದ ಈ ಬರಹವು ಈ ದಿವಸ ನೆರವೇರಿತು ಎಂದು ಹೇಳಲಾರಂಭಿಸಿದನು.

ಲೂಕನು 12:11,12 ಅವರು ನಿಮ್ಮನ್ನು ಸಭಾ ಮಂದಿರಗಳಿಗೂ ನ್ಯಾಯಾಧಿಪತಿಗಳ ಮುಂದೆಯೂ ಅಧಿಕಾರಿಗಳ ಮುಂದೆಯೂ ತಂದಾಗ ಹೇಗೆ ಇಲ್ಲವೆ ಯಾವದನ್ನು ಉತ್ತರಕೊಡಬೇಕೆಂದು ಇಲ್ಲವೆ ಏನು ಹೇಳಬೇಕೆಂದು ಯೋಚಿಸಬೇಡಿರಿ. 12 ಯಾಕಂದರೆ ಅದೇ ಗಳಿಗೆಯಲ್ಲಿ ನೀವು ಹೇಳಬೇಕಾದದ್ದನ್ನು ಪರಿಶುದ್ಧಾತ್ಮನು ನಿಮಗೆ ಕಲಿಸುವನು ಅಂದನು.

ಯೋಹಾನನು 7:38,39 ನನ್ನ ಮೇಲೆ ನಂಬಿಕೆ ಇಡುವವನಿಗೆ ಬರಹವು ಹೇಳಿದ ಪ್ರಕಾರ ಆತನ ಹೊಟ್ಟೆಯೊಳಗಿಂದ ಜೀವ ಕರವಾದ ನೀರಿನ ಹೊಳೆಗಳು ಹರಿಯುವವು ಎಂದು ಕೂಗಿ ಹೇಳಿದನು. 39 (ಆದರೆ ಆತನು ತನ್ನಲ್ಲಿ ವಿಶ್ವಾಸವಿಡುವವರು ಹೊಂದಲಿರುವ ಆತ್ಮನನ್ನು ಕುರಿತು ಇದನ್ನು ಹೇಳಿದನು; ಯಾಕಂದರೆ ಯೇಸು ಇನ್ನೂ ಮಹಿಮೆಯನ್ನು ಹೊಂದಿರಲಿಲ್ಲವಾದ್ದರಿಂದ ಪವಿತ್ರಾ ತ್ಮನು ಇನ್ನೂ ಕೊಡಲ್ಪಟ್ಟಿರಲಿಲ್ಲ.)

ಯೋಹಾನನು 14:16,17 ನಾನು ತಂದೆಯನ್ನು ಬೇಡಿ ಕೊಳ್ಳುವೆನು; ಆಗ ಆತನು ನಿಮಗೆ ಬೇರೊಬ್ಬ ಆದರಿ ಕನನ್ನು ಸದಾಕಾಲವೂ ನಿಮ್ಮ ಸಂಗಡ ಇರುವದಕ್ಕೆ ಕೊಡುವನು. 17 ಆತನು ಸತ್ಯದ ಆತ್ಮನೇ; ಲೋಕವು ಆತನನ್ನು ನೋಡದೆಯೂ ತಿಳಿಯದೆಯೂ ಇರುವದ ರಿಂದ ಆತನನ್ನು ಹೊಂದಲಾರದು. ಆದರೆ ನೀವು ಆತನನ್ನು ಬಲ್ಲಿರಿ. ಯಾಕಂದರೆ ಆತನು ನಿಮ್ಮೊಂದಿಗೆ ವಾಸಿಸುತ್ತಾನೆ ಮತ್ತು

ನಿಮ್ಮೊಳಗಿರುವನು.

ಯೋಹಾನನು 14:26 ತಂದೆಯು ನನ್ನ ಹೆಸರಿನಲ್ಲಿ ಕಳುಹಿಸಿಕೊಡುವ ಪರಿಶುದ್ಧಾತ್ಮನೆಂಬ ಆದರಿಕನೇ ಎಲ್ಲವುಗಳನ್ನು ನಿಮಗೆ ಬೋಧಿಸಿ ನಾನು ನಿಮಗೆ ಹೇಳಿದವುಗಳನ್ನೆಲ್ಲಾ ನಿಮ್ಮ ನೆನಪಿಗೆ ತರುವನು.

ಯೋಹಾನನು 16:7,8 ಆದರೂ ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ; ನಾನು ಹೋಗುವದು ನಿಮಗೆ ಹಿತಕರವಾಗಿದೆ; ಯಾಕಂದರೆ ನಾನು ಹೋಗದಿದ್ದರೆ ಆದರಿಕನು ನಿಮ್ಮ ಬಳಿಗೆ ಬರುವದಿಲ್ಲ; ನಾನು ಹೋದರೆ ಆತನನ್ನು ನಿಮ್ಮ ಬಳಿಗೆ ಕಳುಹಿಸುವೆನು. 8 ಆತನು ಬಂದಾಗ ಪಾಪ ನೀತಿ ನ್ಯಾಯ ತೀರ್ವಿಕೆಯ ವಿಷಯಗಳಲ್ಲಿಯೂ

ಯೋಹಾನನು 16:13-15 ಆದರೆ ಆತನು ಅಂದರೆ ಸತ್ಯದ ಆತ್ಮನು ಬಂದಾಗ ಆತನು ನಿಮ್ಮನ್ನು ಎಲ್ಲಾ ಸತ್ಯಕ್ಕೆ ನಡಿಸುವನು. ಆತನು ತನ್ನಷ್ಟಕ್ಕೆ ತಾನೇ ಮಾತನಾಡದೆ ತಾನು ಕೇಳಿದವುಗಳನ್ನೇ ಮಾತನಾಡುತ್ತಾನೆ; ಮುಂದೆ ಬರುವದಕ್ಕಿರುವ ವಿಷಯಗಳನ್ನು ಆತನು ನಿಮಗೆ ತೋರಿಸುವನು. 14 ಆತನು ನನ್ನನ್ನು ಮಹಿಮೆಪಡಿ ಸುವನು; ಆತನು ನನ್ನದರೊಳಗಿಂದ ತೆಗೆದುಕೊಂಡು ನಿಮಗೆ ತಿಳಿಯಪಡಿಸುವನು. 15 ತಂದೆಗೆ ಇರುವವು ಗಳೆಲ್ಲವು ನನ್ನವೇ; ಆದದರಿಂದಲೇ ಆತನು ನನ್ನದರೊ ಳಗಿಂದ ತೆಗೆದುಕೊಂಡು ನಿಮಗೆ ತಿಳಿಯಪಡಿಸುವನು ಎಂದು ನಾನು ಹೇಳಿದೆನು.

ಯೋಹಾನನು 20:21,22 ಯೇಸು ತಿರಿಗಿ ಅವರಿಗೆ--ನಿಮಗೆ ಸಮಾಧಾನ ವಾಗಲಿ; ನನ್ನ ತಂದೆಯು ನನ್ನನ್ನು ಕಳುಹಿಸಿದ ಮೇರೆಗೆ ನಾನೂ ನಿಮ್ಮನ್ನು ಕಳುಹಿಸುತ್ತೇನೆ ಅಂದನು. 22 ಆತನು ಇದನ್ನು ಹೇಳಿ ಅವರ ಮೇಲೆ ಊದಿ ಅವರಿಗೆ--ನೀವು ಪರಿಶುದ್ಧಾತ್ಮನನ್ನು ಹೊಂದಿಕೊಳ್ಳಿರಿ;

ಅಪೊಸ್ತಲರ ಕೃತ್ಯಗ 1:2,5,8 ಆತನು ಮೇಲಕ್ಕೆ ಎತ್ತಲ್ಪಟ್ಟ ದಿವಸದ ವರೆಗೆ ತಾನು ಮಾಡುವದಕ್ಕೂ ಬೋಧಿಸುವದಕ್ಕೂ ಪ್ರಾರಂಭಿಸಿದ್ದೆಲ್ಲವನ್ನು ನಾನು ನನ್ನ

ಮೊದಲನೆಯ ಪುಸ್ತಕದಲ್ಲಿ ಬರೆದೆನು. 5 ಯಾಕಂದರೆ ಯೋಹಾನನು ನಿಜವಾಗಿಯೂ ನೀರಿನಿಂದ ಬಾಪ್ತಿಸ್ಮ ಮಾಡಿಸಿದನು; ಆದರೆ ನೀವು ಇನ್ನು ಸ್ವಲ್ಪ ದಿವಸ ಗಳಲ್ಲಿಯೇ ಪವಿತ್ರಾತ್ಮನಿಂದ ಬಾಪ್ತಿಸ್ಮ ಹೊಂದುವಿರಿ ಎಂದು ಹೇಳಿದನು.8ಆದರೆ ಪವಿತ್ರಾತ್ಮನು ನಿಮ್ಮ ಮೇಲೆ ಬಂದಾಗ ನೀವು ಬಲವನ್ನು ಹೊಂದುವಿರಿ; ಯೆರೂಸಲೇಮಿನಲ್ಲಿಯೂ ಎಲ್ಲಾ ಯೂದಾಯದ ಲ್ಲಿಯೂ ಸಮಾರ್ಯದಲ್ಲಿಯೂ ಭೂಮಿಯ ಕಟ್ಟ ಕಡೆಯವರೆಗೂ ನೀವು ನನಗೆ ಸಾಕ್ಷಿಗಳಾಗಿರುವಿರಿ ಎಂದು ಹೇಳಿದನು.

ಅಪೊಸ್ತಲರ ಕೃತ್ಯಗ 2:1-4 ಪಂಚಾಶತ್ತಮ ದಿನವು ಪೂರ್ಣವಾಗಿ ಬಂದಾಗ ಅವರೆಲ್ಲರೂ ಒಂದೇ ಮನಸ್ಸಿ ನಿಂದ ಒಂದೇ ಸ್ಥಳದಲ್ಲಿ ಇದ್ದರು. 2 ಆಗ ರಭಸವಾಗಿ ಬೀಸುವ ಬಲವಾದ ಗಾಳಿಯೋಪಾದಿಯಲ್ಲಿ ಒಂದು ಶಬ್ದವು ಆಕಾಶದಿಂದ ಫಕ್ಕನೆ ಬಂದು ಅವರು ಕೂತಿದ್ದ ಮನೆಯನ್ನೆಲ್ಲಾ ತುಂಬಿಕೊಂಡಿತು. 3 ಇದಲ್ಲದೆ ಅಲ್ಲಿ ವಿಂಗಡಿಸಲ್ಪಟ್ಟ ನಾಲಿಗೆಗಳು ಬೆಂಕಿಯಂತೆ ಅವರಿಗೆ ಕಾಣಿಸಿಕೊಂಡು ಅವರಲ್ಲಿ ಪ್ರತಿಯೊಬ್ಬನ ಮೇಲೆ ಅದು ಕೂತುಕೊಂಡಿತು. 4 ಆಗ ಅವರೆಲ್ಲರೂ ಪವಿತ್ರಾತ್ಮಭರಿತರಾಗಿ ಆತ್ಮನು ತಮಗೆ ನುಡಿಯುವ ಶಕ್ತಿಯನ್ನು ಕೊಟ್ಟ ಪ್ರಕಾರ ಅವರು ಬೇರೆಬೇರೆ ಭಾಷೆಗಳಲ್ಲಿ ಮಾತನಾಡುವದಕ್ಕೆ ಪ್ರಾರಂಭಿಸಿದರು.

ಅಪೊಸ್ತಲರ ಕೃತ್ಯಗ 2:17-19 ಕಡೇ ದಿವಸಗಳಲ್ಲಿ ನಾನು ಎಲ್ಲಾ ಮನುಷ್ಯರ ಮೇಲೆ ನನ್ನ ಆತ್ಮವನ್ನು ಸುರಿಸುವೆನು; ನಿಮ್ಮ ಕುಮಾರರೂ ಕುಮಾರ್ತೆಯರೂ ಪ್ರವಾದಿಸು ವರು; ಇದಲ್ಲದೆ ನಿಮ್ಮ ಯೌವನಸ್ಥರಿಗೆ ದರ್ಶನಗಳಾ ಗುವವು; ನಿಮ್ಮ ವೃದ್ಧರಿಗೆ ಕನಸುಗಳು ಬೀಳುವವು ಎಂದು ದೇವರು ಹೇಳುತ್ತಾನೆ. 18 ಇದಲ್ಲದೆ ಆ ದಿನಗಳಲ್ಲಿ ನನ್ನ ಸೇವಕ ಸೇವಕಿಯರ ಮೇಲೆಯೂ ನನ್ನ ಆತ್ಮವನ್ನು ಸುರಿಸುವೆನು; ಅವರೂ ಪ್ರವಾದಿಸು ವರು; 19 ಮೇಲೆ ಆಕಾಶದಲ್ಲಿ ಅದ್ಭುತಕಾರ್ಯಗಳನೂ ಕೆಳಗೆ ಭೂಮಿಯ ಮೇಲೆ ಸೂಚಕ ಕಾರ್ಯಗಳನ್ನೂ ನಾನು ತೋರಿಸುವೆನು. ಇದಲ್ಲದೆ ರಕ್ತ, ಬೆಂಕಿ ಮತ್ತು ಹೊಗೆಯ ಹಬೆಯು ಉಂಟಾಗುವವು. (ಯೋವೇಲ 2:28,29)

ಅಪೊಸ್ತಲರ ಕೃತ್ಯಗ 2:33 ದೇವರ ಬಲಗೈಯಿಂದ ಆತನು ಉನ್ನತ ಸ್ಥಾನಕ್ಕೆ ಏರಿಸಲ್ಪಟ್ಟು ತಂದೆಯಿಂದ ಪವಿತ್ರಾತ್ಮನ ವಾಗ್ದಾನವನ್ನು ಹೊಂದಿ ನೀವು ಈಗ ನೋಡಿ ಕೇಳುವದನ್ನು ಆತನು ಸುರಿಸಿದ್ದಾನೆ.

ಅಪೊಸ್ತಲರ ಕೃತ್ಯಗ 2:38 ಆಗ ಪೇತ್ರನು ಅವರಿಗೆ--ನೀವು ಮಾನಸಾಂತರಪಟ್ಟು ಪಾಪಗಳ ಪರಿಹಾರಕ್ಕಾಗಿ ನಿಮ್ಮಲ್ಲಿ ಪ್ರತಿಯೊಬ್ಬನು ಯೇಸು ಕ್ರಿಸ್ತನ ಹೆಸರಿನಲ್ಲಿ ಬಾಪ್ತಿಸ್ಮ ಮಾಡಿಸಿಕೊಳ್ಳಿರಿ; ಆಗ ನೀವು ಪವಿತ್ರಾತ್ಮನ ದಾನವನ್ನು ಹೊಂದುವಿರಿ.

ಅಪೊಸ್ತಲರ ಕೃತ್ಯಗ 4:31 ಹೀಗೆ ಪ್ರಾರ್ಥಿಸಿದ ಮೇಲೆ ಅವರು ಕೂಡಿದ್ದ ಸ್ಥಳವು ನಡುಗಿತು. ಅವರೆಲ್ಲರೂ ಪವಿತ್ರಾತ್ಮಭರಿತರಾಗಿ ದೇವರ ವಾಕ್ಯವನ್ನು ಧೈರ್ಯದಿಂದ ಮಾತನಾಡಿದರು.

ಅಪೊಸ್ತಲರ ಕೃತ್ಯಗ 8:15-17 ಇವರು ಅಲ್ಲಿಗೆ ಬಂದು ಪವಿತ್ರಾತ್ಮನನ್ನು ಅವರು ಹೊಂದಬೇಕೆಂದು ಅವರಿ ಗೋಸ್ಕರ ಪ್ರಾರ್ಥನೆ ಮಾಡಿದರು. 16 (ಯಾಕಂದರೆ ಪವಿತ್ರಾತ್ಮನು ಅವರಲ್ಲಿ ಒಬ್ಬನ ಮೇಲಾದರೂ ಇನ್ನೂ ಬಂದಿರಲಿಲ್ಲ. ಅವರು ಕರ್ತನಾದ ಯೇಸುವಿನ ಹೆಸರಿ ನಲ್ಲಿ ಬಾಪ್ತಿಸ್ಮವನ್ನು ಮಾತ್ರ ಮಾಡಿಸಿಕೊಂಡಿದ್ದರು). 17 ಅಪೊಸ್ತಲರು ಅವರ ಮೇಲೆ ಕೈಗಳನ್ನಿಡಲು ಅವರು ಪವಿತ್ರಾತ್ಮನನ್ನು ಹೊಂದಿದರು.

ಅಪೊಸ್ತಲರ ಕೃತ್ಯಗ 8:39 ಅವರು ನೀರನ್ನು ಬಿಟ್ಟು ಮೇಲಕ್ಕೆ ಬಂದಾಗ ಕರ್ತನ ಆತ್ಮನು ಫಿಲಿಪ್ಪನನ್ನು ಎತ್ತಿಕೊಂಡು ಹೋಗಲಾಗಿ ಕಂಚುಕಿಯು ಅವನನ್ನು ಕಾಣಲೇಇಲ್ಲ. ಅವನು ತನ್ನ ದಾರಿ ಹಿಡಿದು ಸಂತೋಷವುಳ್ಳವನಾಗಿ ಹೋದನು. (1 ಅರಸುಗಳು 18:12)

ಅಪೊಸ್ತಲರ ಕೃತ್ಯಗ 9:31 ಹೀಗಿರಲಾಗಿ ಯೂದಾಯ ಗಲಿಲಾಯ ಸಮಾ ರ್ಯ ಸೀಮೆಗಳಲ್ಲಿದ್ದ ಸಭೆಗಳು ಭಕ್ತಿವೃದ್ಧಿ ಹೊಂದಿದವು; ಕರ್ತನ ಭಯದಲ್ಲಿ ನಡೆದು ಪವಿತ್ರಾತ್ಮನಿಂದ ಆದರಣೆ ಹೊಂದಿ ಹೆಚ್ಚುತ್ತಾ ಬಂದವು.

ಅಪೊಸ್ತಲರ ಕೃತ್ಯಗ 10:44,45 ಪೇತ್ರನು ಈ ಮಾತುಗಳನ್ನು ಇನ್ನೂ ಹೇಳು ತ್ತಿರುವಾಗ ವಾಕ್ಯವನ್ನು ಕೇಳಿದವರೆಲ್ಲರ ಮೇಲೆ ಪವಿ ತ್ರಾತ್ಮನು ಇಳಿದನು. 45 ಪೇತ್ರನ ಸಂಗಡ ಬಂದಿದ್ದ ಸುನ್ನತಿಯಾದವರಲ್ಲಿ ನಂಬಿದವರೆಲ್ಲಾ ಅನ್ಯಜನಗಳ ಮೇಲೆಯೂ ಪವಿತ್ರಾತ್ಮನು ಸುರಿಸಲ್ಪಟ್ಟದ್ದರಿಂದ ಅತ್ಯಾ ಶ್ಚರ್ಯಪಟ್ಟರು.

ಅಪೊಸ್ತಲರ ಕೃತ್ಯಗ 11:15 ನಾನು ಮಾತನಾ ಡುವದಕ್ಕೆ ಪ್ರಾರಂಭಿಸಿದಾಗ ಪವಿತ್ರಾತ್ಮನು ಮೊದಲು ನಮ್ಮ ಮೇಲೆ ಬಂದಹಾಗೆ ಅವರ ಮೇಲೆಯೂ ಬಂದನು.

ಅಪೊಸ್ತಲರ ಕೃತ್ಯಗ 13:52 ಶಿಷ್ಯರಾದವರು ಸಂತೋಷಪೂರ್ಣರೂ ಪವಿತ್ರಾತ್ಮ ಭರಿತರೂ ಆದರು.

ಅಪೊಸ್ತಲರ ಕೃತ್ಯಗ 19:6 ಆಗ ಪೌಲನು ಅವರ ಮೇಲೆ ಕೈಗಳನ್ನಿಡಲು ಪವಿತ್ರಾತ್ಮನು ಅವರ ಮೇಲೆ ಬಂದನು; ಅವರು ಭಾಷೆಗಳನ್ನಾಡಿದರು ಮತ್ತು ಪ್ರವಾದಿಸಿದರು.

ಅಪೊಸ್ತಲರ ಕೃತ್ಯಗ 20:23 ಆದರೂ ಎಲ್ಲಾ ಪಟ್ಟಣಗಳಲ್ಲಿ ನನಗೆ ಬೇಡಿಗಳೂ ಸಂಕಟಗಳೂ ಕಾದುಕೊಂಡಿವೆ ಎಂದು ಪವಿತ್ರಾತ್ಮನು ಸಾಕ್ಷಿ ಕೊಡುವದನ್ನು ಮಾತ್ರ ಬಲ್ಲೆನು.

ರೋಮಾಪುರದವರಿಗೆ 5:5 ಈ ನಿರೀಕ್ಷೆಯು ನಾಚಿಕೆಪಡಿಸುವದಿಲ್ಲ; ನಮಗೆ ಕೊಡಲ್ಪಟ್ಟಿರುವ ಪವಿತ್ರಾತ್ಮನ ಮೂಲಕವಾಗಿ ದೇವರ ಪ್ರೀತಿಯು ನಮ್ಮ ಹೃದಯಗಳಲ್ಲಿ ಧಾರಾಳವಾಗಿ ಸುರಿದದೆ.

ರೋಮಾಪುರದವರಿಗೆ 8:9 ನೀವಾ ದರೋ ನಿಮ್ಮಲ್ಲಿ ದೇವರಾತ್ಮನು ವಾಸವಾಗಿರುವದಾದರೆ ಶರೀರಾಧೀನರಲ್ಲ, ಆತ್ಮನಿಗೆ ಅಧೀನರಾಗಿದ್ದೀರಿ. ಯಾವ ನಿಗಾದರೂ ಕ್ರಿಸ್ತನ ಆತ್ಮನು ಇಲ್ಲದಿದ್ದರೆ ಅವನು ಕ್ರಿಸ್ತನವ ನಲ್ಲ.

ರೋಮಾಪುರದವರಿಗೆ 8:13-16 ನೀವು ಶರೀರಭಾವವನ್ನು ಅನುಸರಿಸಿದರೆ ಸಾಯುವಿರಿ; ಆದರೆ ನೀವು ಆತ್ಮನಿಂದ ದೇಹದ ಕ್ರಿಯೆಗಳನ್ನು ಸಾಯಿಸುವದಾದರೆ ಜೀವಿಸುವಿರಿ. 14 ಯಾಕಂದರೆ ಯಾರಾರು ದೇವರ ಆತ್ಮನಿಂದ

ನಡಿಸಲ್ಪಡುತ್ತಾರೋ ಅವರು ದೇವರ ಪುತ್ರರಾಗಿದ್ದಾರೆ. 15 ನೀವು ತಿರಿಗಿ ಭಯವುಳ್ಳವರಾಗಿರುವಂತೆ ದಾಸನ ಭಾವವನ್ನು ಹೊಂದಿದವರಲ್ಲ; ಆದರೆ ದತ್ತುಪುತ್ರ ಸ್ವೀಕಾರದ ಆತ್ಮನನ್ನು ಹೊಂದಿರುವದರಿಂದ ದೇವರನ್ನು ನಾವು ಅಪ್ಪಾ, ತಂದೆಯೇ ಎಂದು ಕೂಗುತ್ತೇವೆ. 16 ನಾವು ದೇವರ ಮಕ್ಕಳಾಗಿದ್ದೇವೆಂದು ಆತ್ಮನು ತಾನೇ ನಮ್ಮ ಆತ್ಮದೊಂದಿಗೆ ಸಾಕ್ಷಿ ಹೇಳುತ್ತಾನೆ.

ರೋಮಾಪುರದವರಿಗೆ 8:26 ಹಾಗೆಯೇ ಆತ್ಮನು ಸಹ ನಮ್ಮ ಬಲಹೀನತೆ ಗಳಿಗೆ ಸಹಾಯಮಾಡುತ್ತಾನೆ; ಹೇಗಂದರೆ ನಾವು ತಕ್ಕ ಪ್ರಕಾರ ಏನು ಬೇಡಿಕೊಳ್ಳಬೇಕೋ ನಮಗೆ ಗೊತ್ತಿಲ್ಲವಾದ್ದರಿಂದ ಆತ್ಮನು ತಾನೇ ಉಚ್ಚರಿಸಲಾಗ ದಂಥ ನರಳಾಟದಿಂದ ನಮಗೋಸ್ಕರ ವಿಜ್ಞಾಪನೆ ಮಾಡುತ್ತಾನೆ.

ರೋಮಾಪುರದವರಿಗೆ 15:13 ನಿರೀಕ್ಷೆಗೆ ಆಧಾರನಾದ ದೇವರು ಪವಿತ್ರಾತ್ಮನ ಬಲದಿಂದ ನೀವು ನಿರೀಕ್ಷೆಯಲ್ಲಿ ಅಭಿವೃದ್ಧಿ ಹೊಂದು ವಂತೆ ನಂಬಿಕೆಯಿಂದುಂಟಾದ ಸಂತೋಷ ಸಮಾಧಾನಗಳಿಂದ ನಿಮ್ಮನ್ನು ತುಂಬಿಸಲಿ.

ರೋಮಾಪುರದವರಿಗೆ 15:19 ಹೀಗೆ ಯೆರೂಸಲೇಮ್ ಮೊದಲು ಗೊಂಡು ಇಲ್ಲುರಿಕದ ಸುತ್ತಲೂ ನಾನು ಕ್ರಿಸ್ತನ ಸುವಾರ್ತೆಯನ್ನು ಪೂರ್ಣವಾಗಿ ಸಾರಿದ್ದೇನೆ.

1 ಕೊರಿಂಥದವರಿಗೆ 2:10-13 ನಮಗಾದರೋ ದೇವರು ತನ್ನ ಆತ್ಮನ ಮೂಲಕ ಅವುಗಳನ್ನು ಪ್ರಕಟಿಸಿದನು. ಆ ಆತ್ಮನು ಎಲ್ಲಾ ವಿಷಯಗಳನ್ನು, ಹೌದು, ದೇವರ ಅಗಾಧವಾದ ವಿಷಯಗಳನ್ನು ಕೂಡ ಪರಿಶೋಧಿಸು ವವನಾಗಿದ್ದಾನೆ. 11 ಮನುಷ್ಯನ ಒಳಗಿನ ವಿಷಯಗಳು ಅವನಲ್ಲಿರುವ ಆತ್ಮಕ್ಕೆ ಹೊರತು ಮತ್ತಾರಿಗೆ ತಿಳಿದಾವು? ಹಾಗೆಯೇ ದೇವರ ವಿಷಯಗಳನ್ನು ದೇವರ ಆತ್ಮನೇ ಹೊರತು ಬೇರೆ ಯಾರೂ ಗ್ರಹಿಸುವದಿಲ್ಲ. 12 ನಾವು ಪ್ರಾಪಂಚಿಕ ಆತ್ಮವನ್ನು ಹೊಂದದೆ ದೇವರು ನಮಗೆ ಉಚಿತವಾಗಿ ದಯಪಾಲಿಸಿರುವವುಗಳನ್ನು ತಿಳುಕೊಳ್ಳು ವದಕ್ಕಾಗಿ ದೇವರ ಆತ್ಮನನ್ನೇ ಹೊಂದಿದೆವು. 13 ಇವುಗಳನ್ನು ಮಾನುಷ್ಯಜ್ಞಾನವು ಕಲಿಸಿದ ಮಾತು

ಗಳಿಂದ ಹೇಳದೆ ಪರಿಶುದ್ಧಾತ್ಮನು ಕಲಿಸಿಕೊಟ್ಟ ಮಾತುಗಳಿಂದ ಹೇಳಿ ಆತ್ಮ ಸಂಬಂಧವಾದವುಗಳನ್ನು ಆತ್ಮೀಕವಾದವುಗಳೊಂದಿಗೆ ಹೋಲಿಸುತ್ತೇವೆ.

1 ಕೊರಿಂಥದವರಿಗೆ 3:16 ನೀವು ದೇವರ ಆಲಯವಾಗಿದ್ದೀರೆಂದೂ ದೇವರ ಆತ್ಮನು ನಿಮ್ಮಲ್ಲಿ ವಾಸಮಾಡುತ್ತಾನೆಂದೂ ನಿಮಗೆ ಗೊತ್ತಿಲ್ಲವೋ?

1 ಕೊರಿಂಥದವರಿಗೆ 6:11 ನಿಮ್ಮಲ್ಲಿ ಕೆಲವರು ಅಂಥವರಾಗಿದ್ದಿರಿ; ಆದರೂ ಕರ್ತನಾದ ಯೇಸುವಿನ ಹೆಸರಿನಲ್ಲಿಯೂ ನಮ್ಮ ದೇವರ ಆತ್ಮನಲ್ಲಿಯೂ ತೊಳೆಯಲ್ಪಟ್ಟಿರಿ; ಶುದ್ಧೀಕರಿಸಲ್ಪಟ್ಟಿರಿ ಮತ್ತು ನೀತಿವಂತರೆಂಬ ನಿರ್ಣಯವನ್ನು ಹೊಂದಿದಿರಿ.

1 ಕೊರಿಂಥದವರಿಗೆ 12:3 ಹೀಗಿರುವದರಿಂದ ನಾನು ನಿಮಗೆ ತಿಳಿಸುವದೇನಂದರೆ, ದೇವರಾತ್ಮನಿಂದ ಮಾತನಾಡುವ ಯಾವ ಮನುಷ್ಯನಾದರೂ ಯೇಸು ವನ್ನು ಶಾಪಗ್ರಸ್ತನೆಂದು ಹೇಳುವದಿಲ್ಲ; ಪವಿತ್ರಾತ್ಮ ನಿಂದಲೇ ಹೊರತು ಯಾವ ಮನುಷ್ಯನಾದರೂ ಯೇಸುವನ್ನು ಕರ್ತನೆಂದು ಹೇಳಲಾರನು.

2 ಕೊರಿಂಥದವರಿಗೆ 3:17 ಕರ್ತನು ಆ ಆತ್ಮನೇ ಆಗಿದ್ದಾನೆ; ಕರ್ತನ ಆತ್ಮನು ಯಾರಲ್ಲಿದ್ದಾನೋ ಅವರಿಗೆ ಬಿಡುಗಡೆ ಉಂಟು.

2 ಕೊರಿಂಥದವರಿಗೆ 13:14 ಕರ್ತನಾದ ಯೇಸುಕ್ರಿಸ್ತನ ಕೃಪೆಯೂ ದೇವರ ಪ್ರೀತಿಯೂ ಪವಿತ್ರಾತ್ಮನ ಅನ್ಯೋನ್ಯತೆಯೂ ನಿಮ್ಮೆಲ್ಲರ ಸಂಗಡವಿರಲಿ. ಆಮೆನ್.

ಗಲಾತ್ಯದವರಿಗೆ 4:6 ನೀವು ಪುತ್ರ ರಾಗಿರುವದರಿಂದ--ಅಪ್ಪಾ, ತಂದೆಯೇ ಎಂದು ಕೂಗುವ ತನ್ನ ಮಗನ ಆತ್ಮನನ್ನು ದೇವರು ನಿಮ ಹೃದಯಗಳಲ್ಲಿ ಕಳುಹಿಸಿಕೊಟ್ಟನು.

ಎಫೆಸದವರಿಗೆ 1:13,14 ನಿಮ್ಮ ರಕ್ಷಣೆಯ ವಿಷಯವಾದ ಸುವಾರ್ತೆಯೆಂಬ ಸತ್ಯ ವಾಕ್ಯವನ್ನು ಕೇಳಿ ಕ್ರಿಸ್ತನಲ್ಲಿ ನಂಬಿಕೆಯಿಟ್ಟವರಾದ ನೀವು ಸಹ ವಾಗ್ದಾನ ಮಾಡಲ್ಪಟ್ಟ ಪವಿತ್ರಾತ್ಮನೆಂಬ ಮುದ್ರೆಯನ್ನು ಹೊಂದಿದಿರಿ. 14 ಆತನ ಮಹಿಮೆಯ ಸ್ತುತಿಗೋಸ್ಕರ ಕೊಂಡುಕೊಂಡ ಸ್ವಾಸ್ಥ್ಯದವರಿಗೆ ವಿಮೋಚನೆಯಾ ಗುವ ತನಕ

ಆತನು (ಪವಿತ್ರಾತ್ಮನು) ನಮ್ಮ ಬಾಧ್ಯತೆಗೆ ಸಂಚಕಾರನಾಗಿದ್ದಾನೆ.

ಎಫೆಸದವರಿಗೆ 2:18 ಆತನ ಮೂಲಕ ನಾವೂ ನೀವೂ ಒಬ್ಬ ಆತ್ಮನನ್ನೇ ಹೊಂದಿದವರಾಗಿ ತಂದೆಯ ಬಳಿಗೆ ಪ್ರವೇಶಿಸುವದಕ್ಕೆ ಮಾರ್ಗವಾಯಿತು.

ಎಫೆಸದವರಿಗೆ 4:30 ದೇವರ ಪವಿತ್ರಾತ್ಮನನ್ನು ದುಃಖಪಡಿಸಬೇಡಿರಿ; ಆತನಲ್ಲಿಯೇ ವಿಮೋಚನೆಯ ದಿನಕ್ಕಾಗಿ ಮುದ್ರೆ ಹೊಂದಿದ್ದೀರಲ್ಲಾ.

1 ಥೆಸಲೊನೀಕದವರಿಗೆ 4:8 ಹೀಗಿರಲು ತಾತ್ಸಾರ ಮಾಡು ವವನು ಮನುಷ್ಯನನ್ನಲ್ಲ, ತನ್ನ ಪರಿಶುದ್ಧಾತ್ಮನನ್ನು ನಮಗೆ ದಯಪಾಲಿಸಿರುವ ದೇವರನ್ನೇ ತಾತ್ಸಾರ ಮಾಡುತ್ತಾನೆ.

1 ಥೆಸಲೊನೀಕದವರಿಗೆ 5:19 ಆತ್ಮನನ್ನು ನಂದಿಸಬೇಡಿರಿ;

2 ಥೆಸಲೊನೀಕದವರಿಗೆ 2:13 ಕರ್ತನಿಗೆ ಪ್ರಿಯರಾಗಿರುವ ಸಹೊದರರೇ, ನೀವು ಆತ್ಮನಿಂದ ಶುದ್ಧೀಕರಿಸಲ್ಪಟ್ಟವರಾಗಿ ಸತ್ಯದ ಮೇಲೆ ನಂಬಿಕೆಯನ್ನಿಟ್ಟು ರಕ್ಷಣೆಯನ್ನು ಪಡೆಯುವದಕ್ಕಾಗಿ ದೇವರು ನಿಮ್ಮನ್ನು ಆದಿಯಿಂದ ಆರಿಸಿಕೊಂಡದ್ದರಿಂದ ನಾವು ನಿಮ್ಮ ವಿಷಯದಲ್ಲಿ ಯಾವಾಗಲೂ ದೇವರಿಗೆ ಕೃತಜ್ಞತಾಸ್ತುತಿ ಮಾಡುವದಕ್ಕೆ ಬದ್ಧರಾಗಿದ್ದೇವೆ (1 ಪೇತ್ರನು 1:2)

ತೀತನಿಗೆ 3:5,6 ನಾವು ಮಾಡಿದ ನೀತಿಯ ಕ್ರಿಯೆ ಗಳಿಂದಲ್ಲ, ಆತನ ಕರುಣೆಯಿಂದಲೇ ಪುನರ್ಜನ್ಮದ ತೊಳೆಯುವಿಕೆಯಿಂದಲೂ ಪವಿತ್ರಾತ್ಮನು ನೂತನ ಸ್ವಭಾವವನ್ನುಂಟು ಮಾಡುವದರಿಂದಲೂ ಆತನು ನಮ್ಮನ್ನು ರಕ್ಷಿಸಿದನು. 6 ಆತನು (ದೇವರು) ನಮ್ಮ ರಕ್ಷಕನಾದ ಯೇಸು ಕ್ರಿಸ್ತನ ಮೂಲಕ ಆತನನ್ನು (ಪವಿತ್ರಾತ್ಮನನ್ನು) ನಮ್ಮ ಮೇಲೆ ಧಾರಾಳವಾಗಿ ಸುರಿಸಿ ದ್ದಾನೆ.

ಇಬ್ರಿಯರಿಗೆ 2:4 ದೇವರು ಸಹ ಅವರ ಕೈಯಿಂದ ಸೂಚಕಕಾರ್ಯಗಳನ್ನೂ ಅದ್ಭುತಕಾರ್ಯ ಗಳನ್ನೂ ನಾನಾವಿಧವಾದ ಮಹತ್ಕಾರ್ಯಗಳನ್ನೂ ನಡಿಸಿ ತನ್ನ ಸ್ವಂತ ಚಿತ್ತಾನುಸಾರವಾಗಿ ಪವಿತ್ರಾತ್ಮ ದಾನಗಳಿಂದ ಅವರಿಗೆ ಸಾಕ್ಷಿ

ಕೊಡುತ್ತಿದ್ದನು.

ಇಬ್ರಿಯರಿಗೆ 10:15 ಪವಿ ತ್ರಾತ್ಮನು ಸಹ ಇದರ ವಿಷಯವಾಗಿ ನಮಗೆ ಸಾಕ್ಷಿ ಕೊಡುವಾತನಾಗಿದ್ದಾನೆ;

1 ಪೇತ್ರನು 1:2 ಪವಿತ್ರಾತ್ಮನಿಂದ ಪ್ರತಿಷ್ಟಿಸಲ್ಪಟ್ಟವರಾಗಿ ವಿಧೇಯರಾ ಗುವದಕ್ಕೂ ಯೇಸು ಕ್ರಿಸ್ತನ ರಕ್ತದಿಂದ ಪ್ರೋಕ್ಷಿತರಾಗು ವದಕ್ಕೂ ತಂದೆಯಾದ ದೇವರ ಭವಿಷ್ಯದ್ ಜ್ಞಾನಾನು ಸಾರವಾಗಿ ಆರಿಸಿಕೊಳ್ಳಲ್ಪಟ್ಟವರಿಗೆ ಬರೆಯುವದೇ ನಂದರೆ-- ನಿಮಗೆ ಕೃಪೆಯೂ ಶಾಂತಿಯೂ ಹೆಚ್ಚೆಚ್ಚಾಗಿ ದೊರೆಯಲಿ.

2 ಪೇತ್ರನು 1:21 ಯಾಕಂದರೆ ಹಿಂದಿನ ಕಾಲದಲ್ಲಿ ಯಾವ ಪ್ರವಾದನೆಯೂ ಮನುಷ್ಯನ ಚಿತ್ತದಿಂದ ಬರಲಿಲ್ಲ; ಪರಿಶುದ್ಧರಾದ ದೇವಜನರು ಪವಿತ್ರಾತ್ಮ ಪ್ರೇರಿತರಾಗಿ ಮಾತನಾಡಿದರು.

1 ಯೋಹಾನನು 4:2 ಯೇಸು ಕ್ರಿಸ್ತನು ಶರೀರದಲ್ಲಿ ಬಂದನೆಂದು ಒಪ್ಪಿಕೊಳ್ಳುವ ಪ್ರತಿಯೊಂದು ಆತ್ಮವು ದೇವರಿಗೆ ಸಂಬಂಧಪಟ್ಟದ್ದಾಗಿದೆ; ಇದರಿಂದ ನೀವು ಈ ಆತ್ಮನು ದೇವರಾತ್ಮನೆಂದು ತಿಳಿದುಕೊಳ್ಳು ತ್ತೀರಿ.

1 ಯೋಹಾನನು 5:7,8 ಪರಲೋಕದಲ್ಲಿ ಸಾಕ್ಷಿಕೊಡುವವರು ಮೂವರಿದ್ದಾರೆ; ಅವರು ಯಾರಂದರೆ ತಂದೆಯು, ವಾಕ್ಯವು ಮತ್ತು ಪರಿಶುದ್ಧಾತ್ಮನು; ಮೂವರಾಗಿರುವ ಇವರು ಒಂದಾಗಿದ್ದಾರೆ. 8 ಆತ್ಮ ನೀರು ರಕ್ತ ಈ ಮೂವರು ಭೂಮಿಯ ಮೇಲೆ ಸಾಕ್ಷಿ ಹೇಳುತ್ತಾರೆ; ಈ ಮೂವರು ಒಂದೇಯಾಗಿ ಒಪ್ಪಿಕೊಳ್ಳುತ್ತಾರೆ.

ಯೂದನು 1:20 ಪ್ರಿಯರೇ, ನೀವಾ ದರೋ ನಿಮಗಿರುವ ಅತಿಪರಿಶುದ್ಧವಾದ ನಂಬಿಕೆಯ ಮೇಲೆ ನಿಮ್ಮನ್ನು ನೀವೇ ಕಟ್ಟಿಕೊಂಡು ಪರಿಶುದ್ಧಾತ್ಮನಲ್ಲಿ ಪ್ರಾರ್ಥಿಸಿರಿ.